**Bangalore**
**Regional News**
**10.12.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಬೆಳಗಾವಿಯನ್ನು ಪ್ರತ್ಯೇಕಿಸುವ ಬಾಲಿಷ ಹೇಳಿಕೆಗಳನ್ನು ಸರ್ಕಾರ ಸಹಿಸುವುದಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ

೨. ಬೆಳಗಾವಿಯಲ್ಲಿ ಪಂಚಮಸಾಲಿ ಮೀಸಲಾತಿಗಾಗಿ ಹೋರಾಟ ; ಪ್ರತಿಭಟನಾಕಾರರಿಂದ ಹೆದ್ದಾರಿ ತಡೆ

೩. ಸಕಲ ಸರ್ಕಾರಿ ಗೌರವಗಳೊಂದಿಗೆ ನಾಳೆ ಮದ್ದೂರಿನಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅಂತ್ಯಕ್ರಿಯೆ

೪. ನಾಳೆಯಿಂದ ದೇಶಾದ್ಯಂತ 'ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್' ಸ್ಪರ್ಧೆ ; ರಾಜ್ಯದ ೯ ಶಿಕ್ಷಣ ಸಂಸ್ಥೆಗಳು ಭಾಗಿ

೫. ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಮಹದೇವಪುರ ವಲಯದಿಂದ ಅತಿಹೆಚ್ಚು ಆಸ್ತಿ ತೆರಿಗೆ ಸಂಗ್ರಹ

**<><*<><>*><>**

ಬೆಳಗಾವಿಯ ಕುರಿತು ಮಹಾಜನ್ ಆಯೋಗದ ವರದಿಯೇ ಅಂತಿಮವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು, ಬೆಳಗಾವಿಯನ್ನು ಪ್ರತ್ಯೇಕಿಸುವ ಬಾಲಿಷ ಹೇಳಿಕೆಗಳನ್ನು ಸರ್ಕಾರ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಬೆಳಗಾವಿಯನ್ನು ಪದೇ ಪದೇ ಮಹಾರಾಷ್ಟ್ರಕ್ಕೆ ಸೇರಿಸಬೇಕೆನ್ನುವುದು ಸಮಂಜಸವಲ್ಲ ಎಂದು ತಿಳಿಸಿದ್ದಾರೆ. ಇದೇ ವೇಳೆ ಪಂಚಮಶಾಲಿ ಹೋರಾಟ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಸಮುದಾಯದ ಮುಖಂಡರನ್ನು ಚರ್ಚೆಗೆ ಕರೆದಿದ್ದರೂ ಆಗಮಿಸಿಲ್ಲ ಎಂದು ಹೇಳಿದರು. ಪ್ರಜಾಪ್ರಭುತ್ವದಲ್ಲಿ ಹೋರಾಟಕ್ಕೆ ತಮ್ಮ ವಿರೋಧವಿಲ್ಲ ಎಂದು ಸ್ಪಷ್ಟಪಡಿಸಿದರು.

**<><*<><>*><>**

ಮೀಸಲಾತಿಗಾಗಿ ಪಂಚಮಸಾಲಿ ಸಮುದಾಯ ನಡೆಸುತ್ತಿರುವ ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿದೆ. ಬೆಳಗಾವಿಯ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ್ದು, ಈ ವೇಳೆ ಪೊಲೀಸರು ಪ್ರತಿಭಟನಾಕಾರರನ್ನು ತಡೆದಿದ್ದಾರೆ. ಈ ಸಂದರ್ಭದಲ್ಲಿ ಪೊಲೀಸರಿಗೆ ಮತ್ತು ಪ್ರತಿಭಟನಾಕಾರರಿಗೆ ಗಾಯಗಳಾಗಿವೆ. ಬಸವ ಮೃತ್ಯುಂಜಯ ಸ್ವಾಮಿ ನೇತೃತ್ವದಲ್ಲಿ ಹೆದ್ದಾರಿಯಲ್ಲಿ ರಸ್ತೆ ತಡೆ ನಡೆಸಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಸ್ಥಳಕ್ಕೆ ಬರುವಂತೆ ಆಗ್ರಹಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಥಳಕ್ಕೆ ಬಾರದ್ದನ್ನು ಖಂಡಿಸಿ ಸುವರ್ಣ ಸೌಧ ಮುತ್ತಿಗೆ ಹಾಕಲು ಯತ್ನಿಸಿದ್ದಾರೆ.

**<><*<><>*><>**

ಕರ್ನಾಟಕ ಕಂಡ ಅಪರೂಪದ ಮುಖ್ಯಮಂತ್ರಿಗಳಲ್ಲಿ ಒಬ್ಬರಾಗಿದ್ದ ಎಸ್.ಎಂ ಕೃಷ್ಣ ವಿಧಿವಶರಾಗಿದ್ದಾರೆ. ಮಾಜಿ ಕೇಂದ್ರ ಸಚಿವರೂ ಆಗಿದ್ದ ಇವರು ಬೆಂಗಳೂರಿನ ಸದಾಶಿವನಗರದಲ್ಲಿನ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದಿದ್ದಾರೆ. ಅವರಿಗೆ ೯೨ ವರ್ಷ ವಯಸ್ಸಾಗಿತ್ತು. ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಅಂತಿಮ ಸಂಸ್ಕಾರ ನಾಳೆ ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಬೆಂಗಳೂರು-ಮೈಸೂರು ಹೆದ್ದಾರಿಯ ಸೋಮನಹಳ್ಳಿ ಕಾಫಿ ಡೇ ಬಳಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲು ಸಿದ್ಧತೆ ನಡೆಯುತ್ತಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ನಿಧನದ ಹಿನ್ನೆಲೆಯಲ್ಲಿ ನಾಳೆ ಸರ್ಕಾರಿ ರಜೆ ಘೋಷಣೆ ಮಾಡಲಾಗಿದೆ. ರಾಜ್ಯ ಸರ್ಕಾರ ಮೂರು ದಿನಗಳ ಶೋಕಾಚರಣೆಯನ್ನು ಘೋಷಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು.

**<><*<><>*><>**

ವಿಧಾನಸಭೆ ಅಧಿವೇಶನದ ಎರಡನೇ ದಿನವಾದ ಇಂದು ಮಾಜಿ ಮುಖ್ಯಮಂತ್ರಿ, ಎಂ.ಎಸ್.ಕೃಷ್ಣ ಅವರ ನಿಧನಕ್ಕೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಇಂದು ಬೆಳಿಗ್ಗೆ ಸದನ ಸಮಾವೇಶಗೊಂಡಾಗ ಸಭಾಧ್ಯಕ್ಷರಾದ ಯು.ಟಿ.ಖಾದರ್ ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿ ರಾಜ್ಯದ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ನಿಧನ ಹೊಂದಿದ್ದಾರೆ ಎಂದು ಸದನಕ್ಕೆ ಅತ್ಯಂತ ವಿಷಾದದಿಂದ ತಿಳಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಎಸ್.ಎಂ.ಕೃಷ್ಣ ಅವರು, ಮುತ್ಸದ್ದಿ, ದೂರದೃಷ್ಟಿ ಉಳ್ಳವರಾಗಿದ್ದರು. ಬೆಂಗಳೂರನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಸಿಂಗಾಪುರದಂತೆ ಮಾಡಬೇಕು ಎನ್ನುವ ಉದ್ದೇಶ ಹೊಂದಿದ್ದರು. ಬೆಂಗಳೂರಿಗೆ ಸಿಲಿಕಾನ್ ವ್ಯಾಲಿ ಆಫ್ ಇಂಡಿಯಾ ಎನ್ನುವ ಹೆಗ್ಗಳಿಕೆ ಬರಲು ಎಸ್.ಎಂ.ಕೃಷ್ಣ ಅವರ ಕೊಡುಗೆ ಅಪಾರ ಎಂದು ಕೊಂಡಾಡಿದರು. ಕಾನೂನು ಸಚಿವ ಎಚ್.ಕೆ. ಪಾಟೀಲ್ ಮಾತನಾಡಿ, ಎಸ್.ಎಂ. ಕೃಷ್ಣ ಅವರ ಸ್ಮರಣಾರ್ಥ ವಿಧಾನಸೌಧ ಹಾಗೂ ಆಲಮಟ್ಟಿ ಜಲಾಶಯದ ಬಳಿ ಅವರ ಪುತ್ಥಳಿಯನ್ನು ನಿರ್ಮಿಸಬೇಕು ಎಂದು ತಿಳಿಸಿದರು. ಬಡವರ ಆರೋಗ್ಯದ ಬಗ್ಗೆ ಕಾಳಜಿ ವಹಿಸಿದ ಅವರು ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತಂದಿದ್ದರು ಎಂದು ಸ್ಮರಿಸಿದರು. ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಾತನಾಡಿ, ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟದ ಯೋಜನೆಯನ್ನು ಕೃಷ್ಣ ಅವರು ಆರಂಭಿಸಿದರು. ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಬೆಂಗಳೂರಿಗರು ಎಸ್.ಎಂ.ಕೃಷ್ಣ ಅವರನ್ನು ಮರೆಯಲು ಸಾಧ್ಯವಿಲ್ಲ ಎಂದು ತಿಳಿಸಿದರು. ಬಳಿಕ, ಸದನದ ಕಾರ್ಯಕಲಾಪವನ್ನು ಗುರುವಾರಕ್ಕೆ ಮುಂದೂಡಲಾಯಿತು.

**<><*<><>*><>**

'ಪದ್ಮವಿಭೂಷಣ' ಪುರಸ್ಕೃತ ರಾಜ್ಯದ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ನಿಧನಕ್ಕೆ ವಿಧಾನ ಪರಿಷತ್‌ನಲ್ಲಿ ಸಂತಾಪ ಸೂಚಿಸಲಾಯಿತು. ಎರಡನೇ ದಿನದ ಕಲಾಪ ಆರಂಭವಾಗುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿ ಎಸ್.ಎಂ ಕೃಷ್ಣ ನಿಧನರಾಗಿರುವ ವಿಷಯವನ್ನು ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ ಎಂದು ಸಂತಾಪ ಸೂಚನೆಯ ವಿಷಯವನ್ನು ಪ್ರಕಟಿಸಿದರು. ಬಳಿಕ ಸಭಾ ನಾಯಕ ಮತ್ತು ಸಚಿವ ಎನ್.ಎಸ್ ಬೋಸರಾಜು ಮಾತನಾಡಿ, ಎಸ್.ಎಂ ಕೃಷ್ಣ ಅವರು ಮಹಿಳೆಯರ ಅನುಕೂಲಕ್ಕಾಗಿ ಸ್ತ್ರೀಶಕ್ತಿ ಗುಂಪುಗಳನ್ನು ಆರಂಭಿಸಿದರು. ಅವರ ವಿಚಾರ, ದೂರದೃಷ್ಟಿ ರಾಜ್ಯದ ಬೆಳವಣಿಗೆಗೆ ಸಾಕಷ್ಟು ಅನುಕೂಲವಾಯಿತು ಎಂದು ತಿಳಿಸಿದರು. ಬಳಿಕ ವಿರೋಧ ಪಕ್ಷದ ನಾಯಕರಾದ

ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಎಸ್.ಎಂ ಕೃಷ್ಣ ಅವರು ದೂರದೃಷ್ಟಿ ಹೊಂದಿದ ನಾಯಕರಾಗಿದ್ದರು. ಅವರ ಅಗಲಿಕೆ ರಾಜ್ಯ ಹಾಗೂ ರಾಷ್ಟ್ರಕ್ಕೆ ದೊಡ್ಡ ನಷ್ಟ ಎಂದು ಹೇಳಿದರು. ಪಕ್ಷಭೇದ ಮರೆತು ಹಲವು ಶಾಸಕರು ಕೃಷ್ಣ ಅವರ ಗುಣಗಾನ ಮಾಡಿ ಸಂತಾಪ ಸೂಚಿಸಿದರು. ನಂತರ ಸಭಾಪತಿ ಸದನವನ್ನು ಗುರುವಾರಕ್ಕೆ ಮುಂದೂಡಿರುವುದಾಗಿ ಪ್ರಕಟಿಸಿದರು.

**<><*<><>*><>**

ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ನಿಧನದಿಂದ ದೇಶಕ್ಕೆ ತುಂಬಲಾರದ ನಷ್ಟವಾಗಿದೆ. ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ. ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸುತ್ತೇನೆ" ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಂತಾಪ ಸೂಚಿಸಿದ್ದಾರೆ. ಎಸ್.ಎಂ. ಕೃಷ್ಣ ನಿಧನಕ್ಕೆ ಕೇಂದ್ರ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಕಂಬನಿ ಮಿಡಿದಿದ್ದಾರೆ. ರಾಜ್ಯದ ಇತಿಹಾಸದಲ್ಲಿ ಕೃಷ್ಣ ಚಿರಸ್ಥಾಯಿಯಾಗಿ ಉಳಿಯಲಿದ್ದಾರೆ ಎಂದು ತಿಳಿಸಿದ್ದಾರೆ. ಎಸ್.ಎಂ.ಕೃಷ್ಣ ಅವರು ನಮಗೆಲ್ಲ ಆದರ್ಶಪ್ರಾಯ ರಾಜಕಾರಣಿ ಎಂದು ಕೇಂದ್ರ ಆಹಾರ ಸಚಿವ ಪ್ರಲ್ಹಾದ ಜೋಶಿ ಹುಬ್ಬಳ್ಳಿಯಲ್ಲಿಂದು ಸ್ಮರಿಸಿದ್ದಾರೆ. ಕರ್ನಾಟಕದ ಮುಖ್ಯಮಂತ್ರಿಯಾಗಿ, ದೇಶದ ವಿದೇಶಾಂಗ ಸಚಿವರಾಗಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದ ಪದ್ಮ ವಿಭೂಷಣ ಎಸ್.ಎಂ.ಕೃಷ್ಣ ಅವರ ನಿಧನದ ಸುದ್ದಿ ಕೇಳಿ ಅತೀವ್ರ ದುಃಖವಾಗಿದೆ ಎಂದಿದ್ದಾರೆ. ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ನಿಧನಕ್ಕೆ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಚಿಕ್ಕಮಗಳೂರಿನಲ್ಲಿಂದು ಸಂತಾಪ ಸೂಚಿಸಿದ್ದಾರೆ. ಬಾಳೆಹೊನ್ನೂರಿನ ರಂಭಾಪುರಿ ಜಗದ್ಗುರು ಶ್ರೀ ಪ್ರಸನ್ನ ವೀರಸೋಮೇಶ್ವರ ಸ್ವಾಮೀಜಿ ಕೂಡ ಎಸ್.ಎಂ ಕೃಷ್ಣ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಎಸ್.ಎಂ.ಕೃಷ್ಣ ಅವರೊಂದಿಗಿನ ಒಡನಾಟವನ್ನು ಸ್ಮರಿಸಿದ್ದಾರೆ.

**<><*<><>*><>**

ದೇಶದ ವಿದ್ಯಾರ್ಥಿ ಸಮುದಾಯವನ್ನು ಉತ್ತೇಜಿಸಲು ನಡೆಸಲಾಗುವ 'ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್' ನ ಪ್ರಸಕ್ತ ಸಾಲಿನ ಆವೃತ್ತಿಯು ನಾಳೆಯಿಂದ ಎರಡು ದಿನ ದೇಶಾದ್ಯಂತ ನಡೆಯಲಿದೆ. ರಾಜ್ಯದ ೯ ಶಿಕ್ಷಣ ಸಂಸ್ಥೆಗಳಲ್ಲಿ ಈ ಕಾರ್ಯಕ್ರಮ ನೆರವೇರಲಿದೆ. ಮಂಗಳೂರಿನ ಸುರತ್ಕಲ್‌ನಲ್ಲಿರುವ ನ್ಯಾಷನಲ್ ಇನ್ ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಸಂಸ್ಥೆಯಲ್ಲಿ ೭ನೇ ಆವೃತ್ತಿಯ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್‌ಗೆ ನಾಳೆ ಬೆಳಗ್ಗೆ ಚಾಲನೆ ದೊರೆಯಲಿದೆ. ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್‌ನ್ನು ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಅವರು ದೆಹಲಿಯಲ್ಲಿ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ. ಸಂಜೆ ಪ್ರಧಾನಿ ನರೇಂದ್ರ ಮೋದಿಯವರು ವಿಡಿಯೋ ಕಾನರೆನ್ಸ್ ಮೂಲಕ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ೨೦೨೪ ರ ಗ್ರ್ಯಾಂಡ್ ಫಿನಾಲೆಯಲ್ಲಿ ಯುವ ನಾವೀನ್ಯಕಾರರೊಂದಿಗೆ ಸಂವಾದ ನಡೆಸಲಿದ್ದಾರೆ. ಗ್ರ್ಯಾಂಡ್ ಫಿನಾಲೆಯಲ್ಲಿ ೧೩೦೦ಕ್ಕೂ ಹೆಚ್ಚು ವಿದ್ಯಾರ್ಥಿ ತಂಡಗಳು ಭಾಗವಹಿಸಲಿವೆ. ೫೧ ನೋಡಲ್ ಕೇಂದ್ರಗಳಲ್ಲಿ ಒಂದಾದ ಎನ್ ಐಟಿಕೆ ಸುರತ್ಕಲ್ ನಲ್ಲಿ ನಡೆಯುವ ಸ್ಥಳೀಯ ಸಮಾರಂಭದಲ್ಲಿ ವಿದಿತಾ ಸೊಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್ ನ ಸ್ಥಾಪಕ ಮತ್ತು ಸಿಇಒ ಕೃಷ್ಣ ರಾಜಾ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಹುಬ್ಬಳ್ಳಿಯ ಏಐಇ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿಯೂ ನಾಳೆ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ೭ನೇ ಆವೃತ್ತಿಗೆ ಚಾಲನೆ ಸಿಗಲಿದೆ. ಬೆಂಗಳೂರಿನ ಎಂ.ಎಸ್. ರಾಮಯ್ಯ, ಡಾನ್‌ಬಾಸ್ಕೊ ಮತ್ತು ನ್ಯೂ ಹಾರಿಜನ್ ಇಂನಿಯರಿಂಗ್ ಕಾಲೇಜುಗಳಲ್ಲಿಯೂ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ನಡೆಯಲಿದೆ. ಕೇಂದ್ರ ಸರ್ಕಾರದ ಶಿಕ್ಷಣ

ಸಚಿವಾಲಯ ಹಮ್ಮಿಕೊಂಡ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ೭ನೇ ಆವೃತ್ತಿಯ ಫೈನಲ್ ಹಂತದ ೩೬ ತಾಸುಗಳ ಹ್ಯಾಕಥಾನ್ ಸ್ಪರ್ಧೆ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿಯೂ ನಾಳೆ ನಡೆಯಲಿದೆ.

**<><*<><>*><>**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಂಟು ವಲಯಗಳ ಪೈಕಿ ಮಹದೇವಪುರ ವಲಯವು ಅತಿ ಹೆಚ್ಚು ಆಸ್ತಿ-ತೆರಿಗೆಯನ್ನು ಸಂಗ್ರಹಿಸಿದೆ. ಪಸಕ್ತ ಆರ್ಥಿಕ ಸಾಲಿನಲ್ಲಿ ಮಹದೇವಪುರ ವಲಯಕ್ಕೆ ನಿಗದಿಪಡಿಸಿದ ಆಸ್ತಿ ತೆರಿಗೆ ಮೊತ್ತ ೧೩ ಕೋಟಿ ೯ ಲಕ್ಷ ರೂಪಾಯಿಗಳಾಗಿದ್ದು, ಈ ಪೈಕಿ ನವೆಂಬರ್ ಮಾಸಾಂತ್ಯಕ್ಕೆ ರೂ ೧೧ ಕೋಟಿ ೫೪ ಲಕ್ಷ ರೂಪಾಯಿ ಸಂಗ್ರಹಿಸುವ ಮೂಲಕ ಮಹದೇವಪುರ ವಲಯವು ಅತಿ ಹೆಚ್ಚು ಆಸ್ತಿ ತೆರಿಗೆಯನ್ನು ಸಂಗ್ರಹಿಸಿದೆ. ಮಹದೇವಪುರ ವಲಯ ವ್ಯಾಪ್ತಿಯ ಕೆ.ಆರ್ ಪುರ ಉಪ-ವಿಭಾಗ ಹಾಗೂ ಹೂಡಿ ಉಪ-ವಿಭಾಗಗಳೆರಡೂ ಆಸ್ತಿ-ತೆರಿಗೆ ವಸೂಲಾತಿಯಲ್ಲಿ ಶೇಕಡಾ ೯೦ರಷ್ಟು ಪ್ರಗತಿ ಸಾಧಿಸಿದ್ದು, ಒಟ್ಟಾರೆಯಾಗಿ ಮಹದೇವಪುರ ವಲಯವು ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಶೇಕಡಾ ೮೮.೧೯ ರಷ್ಟು ಗುರಿ ಸಾಧಿಸಿದೆ.

**<><*<><>*><>**

ದೇಶದ ಪ್ರತಿ ಪ್ರಜೆಯು ಘನತೆ ಮತ್ತು ಗೌರವಯುತವಾಗಿ ಬದುಕು ಸಾಗಿಸಲು ಸಂವಿಧಾನಬದ್ಧ ನೀಡಲಾಗಿರುವ ಮಾನವ ಹಕ್ಕುಗಳ ರಕ್ಷಣೆಗೆ ಅಧಿಕಾರಿ ವರ್ಗ ಶ್ರಮಿಸಬೇಕೆಂದು ಕಲಬುರಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅಭಿಪ್ರಾಯಪಟ್ಟಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ರಾಷ್ಟ್ರೀಯ ಮಾನವ ಹಕ್ಕುಗಳ ದಿನಾಚರಣೆ" ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಂವಿಧಾನವು ಪ್ರತಿಯೊಬ್ಬ ದೇಶದ ಪ್ರಜೆಗೆ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಸಮಾನತೆ, ಸ್ವಾತಂತ್ರ್ಯ ನೀಡಿದೆ ಎಂದು ತಿಳಿಸಿದ್ದಾರೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ರೀಡ್ಸ್ ಸಂಸ್ಥೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಜಿಲ್ಲಾ ವಕೀಲರ ಸಂಘ ಹಾಗೂ ಕರ್ನಾಟಕ ಹಾಲು ಉತ್ಪಾದಕರ ಒಕ್ಕೂಟದ ಸಂಯುಕ್ತಾಶ್ರಯದಲ್ಲಿ ಬಳ್ಳಾರಿಯಲ್ಲಿ 'ವಿಶ್ವ ಮಾನವ ಹಕ್ಕುಗಳ ದಿನಾಚರಣೆ' ನಡೆಯಿತು. ಜಾಗೃತಿ ಜಾಥಾಗೆ ಪ್ರಧಾನ ಜಿಲ್ಲಾ ನ್ಯಾಯಾಧೀಶೆ ಕೆ.ಜಿ ಶಾಂತಿ ಚಾಲನೆ ನೀಡಿದರು. ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ನಡೆದ ಮಾನವಹಕ್ಕುಗಳ ದಿನಾಚರಣೆ ಕಾರ್ಯಕ್ರಮದಲ್ಲಿ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾಂತೇಶ ಸಂಗಪ್ಪ ದರಗದ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು ಮಾನವಹಕ್ಕುಗಳ ಉಲ್ಲಂಘನೆಯಾಗದಂತೆ ಜಾಗೃತಿ ವಹಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

**<><*<><>*><>**

<u>ಸಂಕ್ಷಿಪ್ತ ಸುದ್ದಿಗಳು</u>

೧. ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ನಿಜಲಿಂಗಪ್ಪ ನವರಿಗೆ ಚಿತ್ರದುರ್ಗದ ಸೀಬಾರ ಗ್ರಾಮದ ನಿಜಲಿಂಗಪ್ಪ ಸಮಾಧಿ 'ಪುಣ್ಯಭೂಮಿಯಲ್ಲಿ' ಗ್ರಾಮಸ್ಥರು ಪುಷ್ಪ ನಮನ ಸಲ್ಲಿಸಿದರು.

೨. ೨೦೨೪-೨೫ ನೇ ಸಾಲಿಗೆ ಬಿ.ಇಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ನೀಡಲು ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.